ಶ್ರೀ ಎನ್. ಧರ್ಮಸಿಂಗ್ (ಮುಖ್ಯ ಮಂತ್ರಿಗಳು):

ಅ) ಈ ಕೊಲೆ ಪ್ರಕರಣವು ಸಿ.ಬಿ.ಐ ತನಿಖೆಯಲ್ಲಿರುತ್ತದೆ. ಸದರಿ ಪ್ರಕರಣದ ತನಿಖೆಯನ್ನು ಮುಂದುವರೆಸಲು ದಿನಾಂಕ 23–3–2005ರವರೆಗೆ ಮಾನ್ಯ ನ್ಯಾಯಾಲಯದಿಂದ ಅನುಮತಿ ಪಡೆದಿರುತ್ತದೆ. ಆದ್ದರಿಂದ ತನಿಖಾ ವರದಿಯ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) ಮತ್ತು ಇ) ಈ ಮೇಲೆ ಹೇಳಿರುವ ಕಾರಣದಿಂದ ಸರ್ಕಾರದ ಮಟ್ಟದಲ್ಲಿ ಸದ್ಯಕ್ಕೆ ಕ್ರಮವಿರುವುದಿಲ್ಲ.

ಈ) ಹೌದು.

ಉ) ತನಿಖೆಯು ಪ್ರಗತಿಯಲ್ಲಿದೆ.

ಊ) ಉದ್ಭವಿಸುವುದಿಲ್ಲ.

355 (397) ಶ್ರೀ ಶಿವರಾಜ್ ಸಜ್ಜನರ್ (ಹಾವೇರಿ): ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾವೇರಿ ತಾಲ್ಲೂಕಿನ ವರದಾ ನದಿಗೆ ಹೊಸದಾಗಿ ಬ್ಯಾರೇಜ್ ನಿರ್ಮಾಣಕ್ಕೆ ಸರ್ಕಾರದ ಮುಂದೆ ಯೋಜನೆ ಏನಾದರು ಇದೆಯೇ;

ಆ) ಹಾಗಿದ್ದಲ್ಲಿ, ಆ ಬಗ್ಗೆ ಸರ್ಕಾರ ಯಾವಾಗ ಮಂಜೂರಾತಿ ನೀಡಿ ಕಾಮಗಾರಿಗಳನ್ನು ಪ್ರಾರಂಭಿಸುತ್ತದೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ):

ಅ) ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

356 (400) ಶ್ರೀ ಶಿವರಾಜ್ ಸಜ್ಜನರ್ (ಹಾವೇರಿ): ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಪ್ಪರ್ ತುಂಗಾ ಯೋಜನೆ ಯಾವ ಹಂತದಲ್ಲಿದೆ;

ಆ) ಪೂರ್ಣ ಕಾಮಗಾರಿ ಯಾವ ವರ್ಷ ಮುಕ್ತಾಯವಾಗುವುದು;

ಇ) ಇದರಿಂದ ಹಾವೇರಿ ತಾಲ್ಲೂಕಿನ ಎಷ್ಟು ಎಕರೆ ಪ್ರದೇಶ ನೀರಾವರಿಯಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಸಚಿವರು):

ಅ) ತುಂಗಾ ಮೇಲ್ದಂಡೆ ಯೋಜನೆಯ ಅಣೆಕಟ್ಟು ಕಾಮಗಾರಿಯು ಪೂರ್ಣಗೊಳ್ಳುವ ಹಂತದಲ್ಲಿದೆ. ಮುಖ್ಯ ನಾಲೆಯ ಉದ್ದ 329.50 ಕಿ.ಮೀ. ಇದ್ದು, ಇದರಲ್ಲಿ ಕಿಮೀ. 174ರ ವರೆಗಿನ (ಕಿ.ಮೀ.111 ರಿಂದ 114 ಹೊರತುಪಡಿಸಿ) ನಾಲಾ ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತದೆ. ಕಿ.ಮೀ. ನಂ.1 ಮತ್ತು 2ಕ್ಕೆ ಸಂಬಂಧಿಸಿದಂತೆ ಅರಣ್ಯ ಪ್ರದೇಶದ ವರ್ಗಾವಣೆಯು ಅನುಮತಿ ಇತ್ತೀಚೆಗೆ ದೊರೆತಿದ್ದು ಕಾಮಗಾರಿಗಳನ್ನು ಸದ್ಯದಲ್ಲಿಯೇ ಪ್ರಾರಂಭಿಸಲಾಗುವುದು. ಕಿಮೀ.111 ರಿಂದ 114 ರವರೆಗೆ ಬರುವ ನಾಲಾ ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗಿದ್ದು ಶೀಘ್ರವಾಗಿ ಕೈಗೆತ್ತಿಕೊಳ್ಳಲಾಗುವುದು. ಜೂನ್ 2006 ರಲ್ಲಿ ಕಿಮೀ. 174ರ ವರೆಗೆ ಬರುವ ಕಾಮಗಾರಿಗಳನ್ನು ಪೂರ್ಣಗೊಳಿಸಿ ಸಂಬಂಧಿಸಿದ ಅಚ್ಚುಕಟ್ಟಿಗೆ ನೀರೊದಗಿಸಲು ಉದ್ದೇಶಿಸಲಾಗಿದೆ. ಉಳಿದಂತೆ ಕಿಮೀ.175ರ ನಂತರದ ನಾಲಾ ಕಾಮಗಾರಿಗಳ ಸರ್ವೆ ಮತ್ತು ಅಂದಾಜುಪಟ್ಟಿಗಳನ್ನು ತಯಾರಿಸುವ ಕಾರ್ಯವು ಪ್ರಗತಿಯಲ್ಲಿದೆ.